ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ

849(872); ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಸಾರ್ವಜನಿಕ, ಸಮುದಾಯ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು;

ಆ) ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು (ವೃಂದವಾರು ವಿವರಗಳನ್ನು ನೀಡುವುದು);

ಇ) ಆಸ್ಪತ್ರೆಗಳಲ್ಲಿ ವೈದ್ಯರ ಹಾಗೂ ಇತರೆ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಕೊರತೆಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಉ) ಆಸ್ಪತ್ರೆಗಳಲ್ಲಿ ಔಷಧಿಗಳ ಹಾಗೂ ಆಧುನಿಕ ಯಂತ್ರೋಪಕರಣಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಬಂದಿದ್ದಲ್ಲಿ, ಔಷಧಿಗಳ ಹಾಗೂ ಆಧುನಿಕ ಯಂತ್ರೋಪಕರಣಗಳನ್ನು ಆದ್ಯತೆಯ ಮೇರೆಗೆ ಸರಬರಾಜು ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವಾಗ ಒದಗಿಸಲಾಗುವುದು?

ಶ್ರೀ ಯು.ಟಿ. ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಂದು ಸರ್ಕಾರಿ ಸಾರ್ವಜನಿಕ ಆಸ್ಪತ್ರೆ, 2 ಸಮುದಾಯ ಆರೋಗ್ಯ ಕೇಂದ್ರ ಮತ್ತು 7 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇವೆ.

ಆ) ಸದರಿ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಇ) ಬಂದಿದೆ.

ಈ) ಕೊರತೆ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ತೆಗೆದುಕೊಂಡ ಕ್ರಮದ ಬಗ್ಗೆ ಅನುಬಂಧ–2 ರಲ್ಲಿ ನೀಡಲಾಗಿದೆ.

ಉ) ಸರ್ಕಾರಿ ಔಷಧಿ ಮಳಿಗೆಗಳಿಂದ ನಿಗದಿತ ಪ್ರಮಾಣದಲ್ಲಿ ಔಷಧಿಗಳು ಹಾಗೂ ಯಂತ್ರೋಪಕರಣಗಳನ್ನು ಪೂರೈಕೆ ಮಾಡಲಾಗಿದೆ.

ಊ) ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 872ಕ್ಕೆ ಅನುಬಂಧ–1

ಆಸ್ಪತ್ರೆ	ವೃಂದ	ಮಂಜೂರು	ಕಾರ್ಯನಿರತ	ಖಾಲಿ
ಸಾ.ಆ.ಹಗರಿಬೊಮ್ಮನಹಳ್ಳಿ	ವೈದ್ಯರು	11	02	09
	ಇತರೆ ಸಿಬ್ಬಂದಿ	54	38	16
ಸ.ಆ.ಕೇಂದ್ರ, ಹಂಪಸಾಗರ ಸ.ಆ.ಕೇಂದ್ರ ಕೊಟ್ಟೂರು	ವೈದ್ಯರು	07	01	06
	ಇತರೆ ಸಿಬ್ಬಂದಿ	73	48	25
9 ಪ್ರಾ.ಆ.ಕೇಂದ್ರಗಳು ಸೇರಿ	ವೈದ್ಯರು	09	09	0
	ಇತರೆ ಸಿಬ್ಬಂದಿ	117	89	28

ಅನುಬಂಧ–2

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ತಜ್ಞ ವೈದ್ಯರು, ಮತ್ತು ಇತರೆ ಸಿಬ್ಬಂದಿ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರಗಳು:

1. ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ.) ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವ ಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 60,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

2. ಕೆ.ಹೆಚ್.ಎಸ್.ಡಿ.ಆರ್.ಪಿ. ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ₹ 65,000 ಹಾಗೂ ₹ 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು; ರೀಟ್ಯೆನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ–ಗುಂಪಿನ ಜಿಲ್ಲೆಗಳ ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 5,000 ರಿಂದ ₹ 10,000ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ₹ 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

3. ಮೇಲೆ ತಿಳಿಸಿದಂತೆ ಎನ್.ಆರ್.ಹೆಚ್.ಎಂ. / ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಅವಕಾಶಗಳನ್ನು ಕಲ್ಪಿಸಿದ್ದಾಗ್ಯೂ, ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಕೇವಲ 60 ತಜ್ಞ ವೈದ್ಯರು ಮತ್ತು 70 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲಿ ಕೇವಲ 63 ವಿವಿಧ ತಜ್ಞತೆ ಹೊಂದಿರುವ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಒಟ್ಟಾರೆ, ಸರ್ಕಾರಿ ಆಸ್ಪತ್ರೆ / ಕೇಂದ್ರಗಳಲ್ಲಿ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

5. ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 600 ತಜ್ಞ ವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇತ್ತೀಚೆಗೆ ಕ್ರಮ ಕೈಗೊಳ್ಳಲಾಗಿ ಒಟ್ಟು 252 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು.

ಆಯ್ಕೆಯಾದ ಎಲ್ಲಾ 252 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಕೇವಲ 137 ಅಭ್ಯರ್ಥಿಗಳು ಸ್ಥಳ ಆಯ್ಕೆ ಮಾಡಿಕೊಂಡರು. ಆ ಪೈಕಿ ಕೇವಲ 75 ಅಭ್ಯರ್ಥಿಗಳು ಮಾತ್ರ ಕಾರ್ಯವರದಿ ಮಾಡಿಕೊಂಡಿದ್ದಾರೆ.

6. ಎಂ.ಬಿ.ಬಿ.ಎಸ್. ವಿದ್ಯಾರ್ಹತೆಯ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಒಟ್ಟು 2586 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ ಇತ್ತೀಚೆಗೆ ಗುತ್ತಿಗೆ ಆಧಾರದ ಮೇಲೆ 284 ಅಲೋಪತಿ ಮತ್ತು 45 ಆಯುಷ್ ಹಾಗೂ 230 ಬಂಧ-ಪತ್ರ ಅನುಷ್ಠಾನಕೋಶದಿಂದ ನೇಮಕಗೊಂಡ ವೈದ್ಯರು ಸೇರಿದಂತೆ ಒಟ್ಟು 2331 ವೈದ್ಯರು ಕರ್ತವ್ಯ ನಿರ್ವಹಿಸುತಿದ್ದಾರೆ. 255 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿಯಿವೆ. ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಿದೆ. ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದೆ.

7. ಇಲಾಖೆಯಲ್ಲಿ ಖಾಲಿ ಇರುವ ತಜ್ಞವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಕೋರಲಾಗಿದೆ.

8. ಇಲಾಖೆಯಲ್ಲಿ ಬ್ಯಾಕ್ ಲಾಗ್ ಇದ್ದ ಹುದ್ದೆಯಗಳಲ್ಲಿ 107 ಕಿರಿಯ ಆರೋಗ್ಯ ಸಹಾಯಕರು (ಪುರುಷ) ಮತ್ತು 16 ಫಾರ್ಮಸಿಸ್ಟ್ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು ಇತ್ತೀಚೆಗೆ ನೀಡಲಾಗಿದೆ.

9. ಇಲಾಖೆಯಲ್ಲಿ ಖಾಲಿ ಇರುವ 2323 ಹಾಸ್ಪಿಟಲ್ ಅಟೆಂಡೆಂಟ್ ಗ್ರೇಡ್-2 ಗ್ರೂಪ್ 'ಡಿ' ಹುದ್ದೆಗೆ ದಿನಾಂಕ: 20.01.2014 ರಿಂದ 26.01.2014 ರ ವರೆಗೆ ನೇಮಕಾತಿ ಆದೇಶ ನೀಡಲಾಗಿದೆ.

10. ಖಾಲಿ ಇರುವ ಹುದ್ದೆಗಳ ಪೈಕಿ 313 ಕಿರಿಯ ಆರೋಗ್ಯ ಸಹಾಯಕ/ಸಹಾಯಕಿಯರ ಹುದ್ದೆಗೆ ಕೌನ್ಸಿಲಿಂಗ್ ಮುಖಾಂತರ ದಿನಾಂಕ: 29.01.2014 ರಂದು ನೇಮಕಾತಿ ಆದೇಶ ನೀಡಲಾಗುವುದು.

11. 735 ಕಿರಿಯ ಆರೋಗ್ಯ ಸಹಾಯಕರು (ಮಹಿಳೆ) ಹುದ್ದೆಗೆ ನೇಮಕಾತಿ ಆಯ್ಕೆ ಪಟ್ಟಿಯನ್ನು ಈಗಾಗಲೆ ಪ್ರಚಾರ ಪಡಿಸಿದ್ದು, ಫೆಬ್ರುವರಿ 2014 ರಲ್ಲಿ ಕೌನ್ಸಿಲಿಂಗ್ ಮುಖಾಂತರ ನೇಮಕಾತಿ ಆದೇಶ ನೀಡಲು ಕ್ರಮಕೈಗೊಳ್ಳಲಾಗುವುದು.

12. ಈ ಕೆಳಕಂಡ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆ ಅನುಮತಿ ನೀಡಿದ್ದು, ಭಾರತ ಸಂವಿಧಾನ ಅನುಚ್ಛೇದ 371 ಜೆ ರಡಿಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ನಿಯಮಗಳನ್ನು ರೂಪಿಸಿದೆ. ಈ ನಿಯಮಗಳನ್ವಯ ಪ್ರದೇಶವಾರು ಹುದ್ದೆಗಳ ಮಾಹಿತಿ ಸಂಗ್ರಹಿಸಿ, ಈ ನಿಯಮಗಳನ್ವಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು.

ಕ್ರ ಸಂ	ಹುದ್ದೆ	ಭರ್ತಿ ಮಾಡುವ ಸಂಖ್ಯೆ
1	ವಾಹನ ಚಾಲಕರು	318
2	ಗ್ರೂಪ್ ಸಿ ವೃಂದದ ಅರೆವೈದ್ಯಕೀಯ ಹುದ್ದೆಗಳು	450
3	ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ	145
4	ಹಿರಿಯ ಪ್ರಯೋಗ ಶಾಲಾ ಟೆಕ್ನಾಲಾಜಿಸ್ಟ್	87
	ಒಟ್ಟು	**1331**

ಬಿ.ಎಸ್. ನಾಗರಾಜ್
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು)